2. ಪ್ರಶ್ನೋತ್ತರ :

(ಅ) ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ನೀಡಲಾದ ಉತ್ತರಗಳು.

ವಿಷಯ: ಬಾಂದರುಗಳ ನಿರ್ಮಾಣ

1 (21) ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ ನಗರ) : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾದಾಮಿ ಮತಕ್ಷೇತ್ರದಲ್ಲಿ ಬರುವ ಮಲಪ್ರಭಾ ನದಿಗೆ ಇಲಾಖೆಯಿಂದ ಮಂಜೂರಾದ ಬಾಂದರುಗಳು ಎಷ್ಟು (ಪೂರ್ಣ ವಿವರ ಒದಗಿಸುವುದು)

ಆ) ಹಾಗಿದ್ದಲ್ಲಿ, ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಯಾವಾಗ ಪ್ರಾರಂಭಿಸಲಾಗುವುದು. (ವಿವರ ಒದಗಿಸುವುದು)

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ಬಾದಾಮಿ ಮತಕ್ಷೇತ್ರದಲ್ಲಿ ಬರುವ ಮಲಪ್ರಭಾ ನದಿಗೆ ಇಲಾಖೆಯಿಂದ ಮಂಜೂರಾದ ಬಾಂದರುಗಳು 3 ಅವುಗಳ ವಿವರಗಳು ಈ ಕೆಳಗಿನಂತಿವೆ.

1)	ಕಳಸಾ ಗ್ರಾಮದ ಹತ್ತಿರ ಬಾಂದಾರ ನಿರ್ಮಾಣ	ಕಳಸಾ ಗ್ರಾಮದ ಹತ್ತಿರ ಮಲಪ್ರಭಾ ನದಿಗೆ ಅಡ್ಡಲಾಗಿ ಕುಡಿಯುವ ನೀರಿಗಾಗಿ ಹಾಗೂ ಭೂಮಿಯಲ್ಲಿನ ಅಂತರ್ಜಲ ಮಟ್ಟವನ್ನು ಸುಧಾರಿಸುವ ಸಲುವಾಗಿ ರೂ.988.00 ಲಕ್ಷಗಳಿಗೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಅನುಮೋದನೆ ನೀಡಲಾಗಿರುತ್ತದೆ.
2)	ನಂದಿಕೇಶ್ವರ ಹತ್ತಿರ ಬಾಂದಾರ ನಿರ್ಮಾಣ	ನಂದಿಕೇಶ್ವರ ಗ್ರಾಮದ ಹತ್ತಿರ ಮಲಪ್ರಭಾ ನದಿಗೆ ಅಡ್ಡಲಾಗಿ ಕುಡಿಯುವ ನೀರಿಗಾಗಿ ಹಾಗೂ ಭೂಮಿಯಲ್ಲಿನ ಅಂತರ್ಜಲ ಮಟ್ಟವನ್ನು ಸುಧಾರಿಸುವ ಸಲುವಾಗಿ ರೂ.1425.00 ಲಕ್ಷಗಳಿಗೆ ಕಾಮಗಾರಿ

		ಯನ್ನು ಕೈಗೆತ್ತಿಕೊಳ್ಳಲು ಅನುಮೋದನೆ ನೀಡಲಾಗಿರುತ್ತದೆ.
3)	ಎಸ್.ಕೆ. ಅಲೂರ ಗ್ರಾಮದ ಹತ್ತಿರ ಬಾಂದಾರ ನಿರ್ಮಾಣ	ಎಸ್.ಕೆ. ಆಲೂರ ಗ್ರಾಮದ ಹತ್ತಿರ ಮಲಪ್ರಭಾ ನದಿಗೆ ಅಡ್ಡಲಾಗಿ ಕುಡಿಯುವ ನೀರಿಗಾಗಿ ಹಾಗೂ ಭೂಮಿಯಲ್ಲಿನ ಅಂತರ್ಜಲ ಮಟ್ಟವನ್ನು ಸುಧಾರಿಸುವ ಸಲುವಾಗಿ ರೂ.685.00 ಲಕ್ಷಗಳಿಗೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಅನುಮೋದನೆ ನೀಡಲಾಗಿರುತ್ತದೆ.

ಆ) ಮೇಲಿನ ಮೂರು ಬಾಂದಾರುಗಳ ಸರ್ವೆ, ವಿನ್ಯಾಸ ಹಾಗೂ ಅಂದಾಜು ಪತ್ರಿಕೆಗಳನ್ನು ತಯಾರಿಸಿಕೊಳ್ಳಲಾಗಿದ್ದು, ಇವುಗಳನ್ನು ಕರ್ನಾಟಕ ನೀರಾವರಿ ನಿಗಮದ ತಾಂತ್ರಿಕ ಉಪ ಸಮಿತಿಯು ಪರಿಶೀಲಿಸಿ, ಕೆಲವು ಮಾರ್ಪಾಡುಗಳನ್ನು ಮಾಡಲು ಸೂಚಿಸಿದೆ. ಅದರಂತೆ ಮಾರ್ಪಾಡುಗಳನ್ನು ಮಾಡಿ ಬಾಂದಾರುಗಳ ಅಂದಾಜು ಪತ್ರಿಕೆಗೆ ಅನುಮೋದನೆ ನೀಡಿ ಟೆಂಡರ್ ಪ್ರಕ್ರಿಯೆಯನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು.

ಶ್ರೀ ಅಪ್ಪಾಸಾಹೇಬ್ ಮಲ್ಲಪ್ಪ ಪಟ್ಟಣಶೆಟ್ಟಿ : ಮಾನ್ಯ ಅಧ್ಯಕ್ಷರೆ ಸಚಿವರು ಉತ್ತರವನ್ನು ಕೊಟ್ಟಿದ್ದಾರೆ. 3 ಬಾಂದಾರುಗಳಿಗೆ ನನ್ನ ಮತಕ್ಷೇತ್ರದಲ್ಲಿ ಕೊಟ್ಟಿದ್ದಕ್ಕೆ ಮೊದಲಿಗೆ ಅವರಿಗೆ ಧನ್ಯವಾದ ಅರ್ಪಿಸುತ್ತೇನೆ. ಬಹಳ ದಿವಸ ಗಳಾಯಿತು. Technical Commitee ಯಿಂದ ದಯವಿಟ್ಟು ಅದನ್ನು ತುಮಕೂರು ಮಾಡಿಸಿ ಶೀಘ್ರವೇ ಕ್ರಮ ಕೈಗೊಂಡರೆ ನನ್ನ ಮತಕ್ಷೇತ್ರದ ಜನರಿಗೆ ನೀರಾವರಿ ಮತ್ತು ಕುಡಿಯುವ ನೀರಿನ ಅನುಕೂಲವಾಗುತ್ತದೆ. ದಯವಿಟ್ಟು ಮಾನ್ಯ ಸಚಿವರು ಬೇಗನೆ ಕ್ರಮ ಕೈಗೊಳ್ಳಬೇಕೆಂದು ತಮ್ಮ ಮೂಲಕ ಆಗ್ರಹ ಮಾಡುತ್ತೇನೆ.

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) : ಮಾನ್ಯ ಸಭಾಧ್ಯಕ್ಷರೆ, ಸನ್ಮಾನ್ಯ ಶಾಸಕರು ಹೇಳಿದಂತೆ ಕಳಸಾ, ನಂದಿಕೇಶ್ವರ ಮತ್ತು ಎಸ್.ಕೆ. ಆಲೂರ ಈ ಮೂರು ಗ್ರಾಮದ ಬಾಂದಾರ ನಿರ್ಮಾಣಕ್ಕೆ ಸರ್ಕಾರ ಮಂಜೂರಾತಿಯನ್ನು ಕೊಟ್ಟಿದೆ. ಆದರೆ DPR ಮಾಡುವಂತಹ ಸಂದರ್ಭದಲ್ಲಿ ಕೆಲವು ಬದಲಾವಣೆ ಮತ್ತು revised estimate ಆಗುವ ಕಾರಣದಿಂದ ಸ್ವಲ್ಪ

ತಡ ಆಗಿದ್ದು ನಿಜ. ಆದರೆ ಈಗ ಎಲ್ಲವೂ ಬಗೆಹರಿದಿದೆ. ಎಸ್.ಕೆ. ಆಲೂರ, ಬಾಂದಾರದು ಇನ್ನು ಎರಡು ಮೂರು ದಿವಸದಲ್ಲಿ ಟೆಂಡರ್ ಕರೆಯುತ್ತಿದ್ದೇವೆ. ಮತ್ತೆ ಇನ್ನೂ ಎರಡು ಬಾಂದಾರದ್ದು ಮುಂದಿನ 15 ದಿವಸಗಳಲ್ಲಿ ಟೆಂಡರ್ ಪ್ರಕ್ರಿಯೆಯನ್ನು ಪ್ರಾರಂಭ ಮಾಡುತ್ತೇವೆ.

ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ : ಮಾನ್ಯ ಸಚಿವರಿಗೆ ಧನ್ಯವಾದಗಳು.

ಅಧ್ಯಕ್ಷರು : ಮಾನ್ಯ ಎ. ಮಂಜು ಅವರ ಪ್ರಶ್ನೆಗೆ ಸಮಯ ಕೋರಿದ್ದಾರೆ. 29ನೇ ತಾರೀಖಿನಂದು ಇಟ್ಟುಕೊಂಡಿದ್ದೇವೆ.

ಶ್ರೀ ಎ.ಮಂಜು : ಮಾನ್ಯ ಅಧ್ಯಕ್ಷರೆ, ಸುಮಾರು ಸಲ ನನಗೆ ಈ ರೀತಿ ಆಗಿದೆ. ಉತ್ತರ ಬರುತ್ತಲೇ ಇಲ್ಲ. ಈ ರೀತಿ ಆದರೆ ನಾವ್ಯಾಕೆ ಸದನಕ್ಕೆ ಬರಬೇಕು?

ಶ್ರೀ ಬಸವರಾಜ ಬೊಮ್ಮಾಯಿ : 29ಕ್ಕೆ ಉತ್ತರ ಕೊಡುತ್ತೇನೆ.

ವಿಷಯ: ಕಾಂಚೀಪುರ ಹಾಗೂ ಸುತ್ತಮುತ್ತ ವ್ಯಾಪ್ತಿಯಲ್ಲಿನ ಕೃಷಿ ತೆಂಗಿನ ತೋಟ

3 (23) ಶ್ರೀ ಗೂಳಿಹಟ್ಟಿ ಡಿ. ಶೇಖರ (ಹೊಸದುರ್ಗ) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕಿನ ಕಾಂಚಿಪುರ ಮತ್ತು ಸುತ್ತಮುತ್ತಲಿನ ಹಳ್ಳಿಗಳ ವ್ಯಾಪ್ತಿಯಲ್ಲಿನ ಕೃಷಿ, ತೆಂಗಿನ ತೋಟಗಳಿರುವ ಜಮೀನುಗಳನ್ನು ಅರಣ್ಯ ಇಲಾಖೆಯಿಂದ ಪದೆ ಪದೇ ತೆರವುಗೊಳಿಸಲು ನೋಟೀಸ್‌ಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ರೈತರ ಕೃಷಿ ಜಮೀನು, ತೋಟ, ಅರಣ್ಯ ಇಲ್ಲದೇ ಇದ್ದರು ರೈತರಿಗೆ ಅರಣ್ಯ ಇಲಾಖೆಯಿಂದ ಆಗುತ್ತಿರುವ ತೊಂದರೆ ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮ ಏನು;

ಇ) ಹೊಸದುರ್ಗ ತಾಲ್ಲೂಕಿನ ಹೊನ್ನೇನಹಳ್ಳಿ ಮತ್ತು ಗಾಳರಂಗಯ್ಯನಹಟ್ಟಿ ಗ್ರಾಮಗಳಲ್ಲಿ ರೈತರು ಅನೇಕ ವರ್ಷಗಳಿಂದ ಕೃಷಿ, ತೆಂಗಿನ ತೋಟಗಳಿಂದ ತುಂಬಿರುವ ಬಡ ರೈತರಿಗೆ ಅರಣ್ಯ ಇಲಾಖೆಯಿಂದ ಆಗುತ್ತಿರುವ ಕಿರುಕುಳದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ರೈತರ ಸಹಾಯಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ಒದಗಿಸುವುದು)